**Deposition Sheets (RP.No.57) Form No.4**

**IN THE COURT OF II Addl. CIVIL JUDGE & J.M.F.C., KARKALA.**

**Criminal Case No. 400/2017**

**ಪಿ.ಡಬ್ಲ್ಯು : 8 ಸಿ.ಡಬ್ಲ್ಯು : 10**

ಸಾಕ್ಷಿದಾರನ ಹೆಸರು : ರಮೇಶ್ ಹೆಗ್ಡೆ
ತಂದೆಯ ಹೆಸರು : ಮಹಾಬಲ ಹೆಗ್ಡೆ
ಪ್ರಾಯ : 49 ವರ್ಷ
ಉದ್ಯೋಗ : ಕೃಷಿ
ವಾಸ : ಮಿಯಾರು

ದಿನಾಂಕ **24.02.2023** ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆಃ ಸಹಾಯಕ ಸರ್ಕಾರಿ ಅಭಿಯೋಜಕರುಃ-**

ಸಾಕ್ಷಿಯು ನಿಪಿ-8 ಮತ್ತು 9 ರಲ್ಲಿರುವ ತನ್ನ ಸಹಿಗಳನ್ನು ನೋಡಿ ಗುರುತಿಸಿದ್ದು ಅವುಗಳನ್ನು ನಿಪಿ-8(ಸಿ) ಮತ್ತು 9(ಸಿ) ಎಂದು ಗುರುತಿಸಲಾಯಿತು. ನಿಪಿ-8 ಮತ್ತು 9 ಕ್ಕೆ ಎಲ್ಲಿ ಯಾವ ವಿಚಾರಕ್ಕಾಗಿ ಸಹಿ ಮಾಡಿರುತ್ತೇನೆ ಎಂದು ಗೊತ್ತಿಲ್ಲ. ನನ್ನ ಸಮಕ್ಷಮದಲ್ಲಿ ಯಾವುದೇ ಸೊತ್ತುಗಳನ್ನು ವಶಪಡಿಸಿಕೊಂಡಿರುವುದಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಸಸಅ ರವರು ಅನುಮತಿ ಕೋರಿರುತ್ತಾರೆ. ಅನುಮತಿ ನೀಡಲಾಯಿತು)

**ಪಾಟೀ ಸವಾಲು : ಸಹಾಯಕ ಸರ್ಕಾರಿ ಅಭಿಯೋಜಕರುಃ-**

2. ದಿನಾಂಕ 14.12.2016 ರಂದು ಪೊಲೀಸರು ಸುಧಾ ಜ್ಯುವೆಲ್ಲರ್ಸ್ ನಲ್ಲಿ ನನ್ನ ಸಮಕ್ಷಮ ಸೊತ್ತು ಸ್ವಾಧೀನತ ಮಹಜರು ನಡೆಸಿ ಬೆಳ್ಳಿಯ ಸೊತ್ತುಗಳನ್ನು ವಶಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಸದ್ರಿ ದಿನಾಂಕದಂದು ವಿ ಆರ್ ಎಸ್ ಫೈನಾನ್ಸ್ ನಲ್ಲಿ ನನ್ನ ಸಮಕ್ಷಮ

ಸೊತ್ತು ಸ್ವಾಧೀನತಾ ಮಹಜರು ನಡೆಸಿ ಬಂಗಾರದ ಸೊತ್ತುಗಳನ್ನು ವಶಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಪಾಟೀ ಸವಾಲು</u>** ಃ ಆರೋಪಿ ಪರ ಃ ಶ್ರೀ ಕೆ ಬಿ ಎಸ್ ವಕೀಲರಿಂದ ಃ

ನಾನು ನನ್ನ ವೈಯುಕ್ತಿಕ ಕಾರಣಕ್ಕೆ ಪೊಲೀಸ್ ಠಾಣೆಗೆ ಹೋದಾಗ ಪೊಲೀಸರು ಸಹಿ ಪಡೆದುಕೊಂಡಿರುತ್ತಾರೆ. ಯಾವ ವಿಚಾರಕ್ಕೆ ಸಹಿ ಪಡೆದುಕೊಂಡಿರುತ್ತಾರೆ ಎಂದು ನನಗೆ ಗೊತ್ತಿಲ್ಲ.

ಮರುವಿಚಾರಣೆ ಃ ಇಲ್ಲ

ನನ್ನ ಉಕ್ತಲೇಖನಾ ರೀತ್ಯಾ ಬಹಿರಂಗ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.

ಓದಿ ಹೇಳಿ ಕೇಳಿ ಸರಿ ಇದೆ.

2 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರ.ದ.ನ್ಯಾ.ದಂ. ಕಾರ್ಕಳ